**<u>ದಿನಾಂಕಃ 24-04-2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣೀಕರಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ವಾದಿಪರ ಶ್ರೀ ವಕೀಲರಿಂದಃ</u>**

**ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಸದರಿ ಪ್ರಮಾಣ ಪತ್ರದಲ್ಲಿರುವ ಎಲ್ಲಾ ಅಂಶಗಳು ಸತ್ಯವಾಗಿದ್ದು ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ ಎಂದು ನುಡಿದಿರುತ್ತಾರೆ. ಸದರಿ ಸಾಕ್ಷಿಯನ್ನು ಪಿ.ಡಬ್ಲ್ಯೂ-1 ಎಂದು ಪರಿಗಣಿಸಲಾಯಿತು.**

ನಾನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಸರ್ವೆ ನಂ.2, ಸರ್ವೆ ನಂ.3, ಸರ್ವೆ ನಂ.233/1, ಸರ್ವೆ ನಂ.253 ನೇದ್ದವುಗಳಿಗೆ ಸಂಬಂಧಿಸಿದ ಗಣಕೀಕೃತ ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-1 ರಿಂದ 4 ಎಂದು, ಗ್ರಾಮ ಪಂಚಾಯತಿ ನಂ.1-1/22/2 ನೇದರ ಕರಆಕರಣೆ ಯಾದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು, ಇನ್ನೊಂದು ಕರಆಕರಣೆ ಯಾದಿಯ ದೃಡೀಕೃತ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು, ಸರ್ವೆ ನಂ.2/ಅ, ಸರ್ವೆ ನಂ.3, ಸರ್ವೆ ನಂ.3/1 ನೇದ್ದವುಗಳಿಗೆ ಸಂಬಂಧಿಸಿದ ಕೈಬಹರ ಪಹಣಿಗಳ ದೃಡೀಕೃತ ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಅನುಕ್ರಮವಾಗಿ ನಿಪಿ-7 ರಿಂದ 9 ಎಂದು, ಸರ್ವೆ ನಂ.233/ಆ ನೇದ್ದರ 03 ಕೈಬಹರ ಪಹಣಿಗಳ ದೃಡೀಕೃತ ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಅನುಕ್ರಮವಾಗಿ ನಿಪಿ-10 ರಿಂದ 12 ಎಂದು, ಗುರುತಿಸಲಾಯಿತು. ದಾವೆಯಲ್ಲಿ ಕೋರಿದಂತೆ ಡಿಕ್ರಿ ಮಾಡಬೇಕಾಗಿ ವಿನಂತಿ.

**ಪಾಟೀ ಸವಾಲುಃ ಪ್ರತಿವಾದಿಪರ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದರಿಂದ ಕಾಲಾವಕಾಶ ನೀಡಲಾಯಿತು.**

**<u>(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)</u>**

ಓ. ಹೇ.ಕೇ. ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು,
ಶೋರಾಪುರ.